# ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು**

**E-mail:commissioner.pue@gmail.com. * Ph. No.23361857, 23361858* Fax-23361852**


ಸಂಖ್ಯೆ ಪಪೂಶಿಇ/ಸಿಬ್ಬಂದಿ/ಸಿಆರ್-10/ಬಿಆರ್-1/2013/ಖಾಪೂಸೇ/2017-18 ದಿನಾಂಕ:05-12-2017.

## ಜ್ಞಾಪನ

**ವಿಷಯ:** 2013ನೇ ಸಾಲಿನಲ್ಲಿ ನೇಮಕಗೊಂಡ ಉಪನ್ಯಾಸಕರ ಖಾಯಂ ಪೂರ್ವ ಸೇವಾವಧಿಯನ್ನು ತೃಪ್ತಿಕರವೆಂದು ಘೋಷಿಸುವ ಬಗ್ಗೆ.

**ಉಲ್ಲೇಖ:**
1. ಪದವಿ ಪೂರ್ವ ಶಿಕ್ಷಣ ಇಲಾಖೆ, ವಿಶೇಷ ನೇಮಕಾತಿ ಅಧಿಸೂಚನೆ: ಪಪೂಶಿ ಸಿಬ್ಬಂದಿ-1 ವಿಶೇಷ ನೇಮಕ 01/2011-12 ದಿನಾಂಕ: 13-04-2012.
2. ವಿಶೇಷಾಧಿಕಾರಿಗಳ ಕಛೇರಿ, ಕೇಂದ್ರಿಕೃತ ದಾಖಲಾತಿ ಘಟಕ, ಬೆಂಗಳೂರು ಇವರ ಪತ್ರ: ಸಿಎಸಿ 4/ಪಪೂಶಿ/ನೇ/01/2012-13 ದಿನಾಂಕ 13-02-2012.
3. ಈ ಕಛೇರಿಯ ಅಧಿಸೂಚನೆ ಸಂಖ್ಯೆ: ಪಪೂಶಿ ಸಿಬ್ಬಂದಿ-2 ವಿಶೇಷ ನೇಮಕ 01/2011-12 (ಭಾಗ-2) ದಿನಾಂಕ 27-06-2013.
4. ಉಪ ನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ ರಾಮನಗರ ಜಿಲ್ಲೆ ಇವರ ಪ್ರಸ್ತಾವನೆಗಳು.

*****

**<u>ಪ್ರಸ್ತಾವನೆ:</u>**

2013ನೇ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳಿಗೆ ವಿಶೇಷಾಧಿಕಾರಿಗಳ ಕಚೇರಿ, ಕೇಂದ್ರೀಕೃತ ದಾಖಲಾತಿ ಘಟಕದಿಂದ ನೇಮಕಾತಿ ಹೊಂದಿ, ಉಲ್ಲೇಖ-3ರ ಆದೇಶದಂತೆ ಕಾರ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಉಪನ್ಯಾಸಕರು, ನಾಲ್ಕು ವರ್ಷಗಳ ಖಾಯಂ ಪೂರ್ವ ಸೇವಾವಧಿಯನ್ನು ತೃಪ್ತಿಕರವಾಗಿ ಪೂರೈಸಿರುವರೆಂದು ಘೋಷಿಸುವ ಸಲುವಾಗಿ ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರು ಶಿಫಾರಸ್ಸಿನೊಂದಿಗೆ ಸಲ್ಲಿಸಲಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**<u>ಆದೇಶ:</u>**

ಈ ಕೆಳಕಂಡ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳ ಹೆಸರಿನ ಮುಂದೆ ವಿವರಿಸಿದಂತೆ ನಾಲ್ಕು ವರ್ಷಗಳ ಪರಿವೀಕ್ಷಣಾ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿರುವ ಹಿನ್ನೆಲೆಯಲ್ಲಿ, ಸದರಿಯವರ ಪರಿವೀಕ್ಷಣಾ ಅವಧಿಯನ್ನು ಕರ್ನಾಟಕ ನಾಗರಿಕ ಸೇವಾ (ಪರೀಕ್ಷಾರ್ಥ) ನಿಯಮಗಳು 1977ರ ನಿಯಮ 5 (1) (ಎ) ಅನ್ವಯ ತೃಪ್ತಿಕರವಾಗಿ ಪೂರೈಸಿದ್ದಾರೆಂದು ಘೋಷಿಸಲಾಗಿದೆ. ಈ ಮಾಹಿತಿಯನ್ನು ಸಂಬಂಧಪಟ್ಟ ಉಪನ್ಯಾಸಕರ ಸೇವಾ ಪುಸ್ತಕದಲ್ಲಿ ನಮೂದಿಸಿ ದೃಢೀಕರಿಸುವಂತೆ ಸಂಬಂಧಪಟ್ಟ ಕಾಲೇಜು ಪ್ರಾಂಶುಪಾಲರಿಗೆ ತಿಳಿಸಿದೆ.

| ಕ್ರಮ ಸಂಖ್ಯೆ | ಉಪನ್ಯಾಸಕರ ಹೆಸರು ಮತ್ತು ವಿಳಾಸ ಶ್ರೀಮತಿ/ಶ್ರೀ | ನೇಮಕಾತಿ ದಿನಾಂಕ | ಖಾಯಂ ಪೂರ್ವ ಸೇವಾವಧಿಯನ್ನು ತೃಪ್ತಿಕರವೆಂದು ಪೂರೈಸಿದ ದಿನಾಂಕ | ಖಾಯಂ ಪೂರ್ವ ಸೇವಾವಧಿಯನ್ನು ತೃಪ್ತಿಕರವೆಂದು ಘೋಷಿಸಿದ ದಿನಾಂಕ |
|---|---|---|---|---|
| 1 | 2 | 3 | | 5 |
| 1 | ಧನಂಜಯ ಕೆ ಎಸ್<br>ಆಂಗ್ಲಭಾಷಾ ಉಪನ್ಯಾಸಕರು.<br>ಸರ್ಕಾರಿ ಪದವಿ ಪೂರ್ವ ಕಾಲೇಜು.<br>ಕೋಡಂಬಳ್ಳಿ, ಚನ್ನಪಟ್ಟಣ ತಾಲ್ಲೂಕು.<br>ರಾಮನಗರ ಜಿಲ್ಲೆ. | 29-06-2013 | 28-06-2017 | 29-06-2017 |

| | | | | |
|---|---|---|---|---|
| 2 | ಉಮಾದೇವಿ ಡಿ<br>ಜೀವಶಾಸ್ತ್ರ ಉಪನ್ಯಾಸಕರು.<br>ಸರ್ಕಾರಿ ಪದವಿ ಪೂರ್ವ<br>ಕಾಲೇಜು, ಮಾಗಡಿ,<br>ರಾಮನಗರ ಜಿಲ್ಲೆ. | 01-07-2013 | 30-06-2017 | 01-07-2017 |

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:-

1. ಮಹಾಲೇಖಪಾಲರು, (ಎ & ಇ)-ಕರ್ನಾಟಕ, ಪಾರ್ಕ್‌ಹೌಸ್ ಬೆಂಗಳೂರು.
2. ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ರಾಮನಗರ ಜಿಲ್ಲೆ.
3. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ, ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು – ಇವರಿಗೆ ಅಂತರ್ಜಾಲದಲ್ಲಿ ಅಳವಡಿಸಲು.
4. ಪ್ರಾಂಶುಪಾಲರು, ಸರ್ಕಾರಿ ಪದವಿ ಪೂರ್ವ ಕಾಲೇಜು ______________________ ರಾಮನಗರ ಜಿಲ್ಲೆ, **ಮೂಲ ಸೇವಾ ಪುಸ್ತಕವನ್ನು** ಮುಂದಿನ ಕ್ರಮಕ್ಕಾಗಿ ಹಿಂತಿರುಗಿಸಿದೆ.
5. ಸಂಬಂಧಿಸಿದ ಸಿಬ್ಬಂದಿಗಳಿಗೆ – ಪ್ರಾಂಶುಪಾಲರ ಮೂಲಕ.
6. ಕಛೇರಿ ಪ್ರತಿ.